ಕರ್ನಾಟಕ ವಿಧಾನ ಸಭೆ

ಮಂಗಳವಾರ 17ನೇ ಮಾರ್ಚ್ 1998ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 11.10 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು: ಶ್ರೀ ರಮೇಶ್‌ಕುಮಾರ್ ಅವರು, ಪೀಠವನ್ನು ಅಲಂಕರಿಸಿದ್ದರು.

1) ವರದಿಗಳನ್ನೊಪ್ಪಿಸುವುದು

ಶ್ರೀ ಸಿ. ಗುರುನಾಥ್ (ಶಹಾಬಾದ್):– ಮಾನ್ಯ ಅಧ್ಯಕ್ಷರೆ, ನಾನು 1997-98ನೇ ಸಾಲಿನ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖಾ ವಿಷಯ ಸಮಿತಿಯ ಎರಡನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು:– ಒಪ್ಪಿಸಲಾಯಿತು.

2) ಶಾಸನ ರಚನೆ

ಅ) ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕ 1998. ವಿಧೇಯಕ ಮಂಡನೆ.

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಸಚಿವರು): (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ವಾರ್ತಾ ಮತ್ತು ಪ್ರಚಾರ ಮಂತ್ರಿಗಳ ಪರವಾಗಿ) ಮಾನ್ಯ ಅಧ್ಯಕ್ಷರೆ, ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ), ವಿಧೇಯಕ, 1998 ಅನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ,

"ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು,

ಶ್ರೀ ಎಸ್.ಎಸ್.ಪಾಟೀಲ್ :– (ಸಹಕಾರ ಸಚಿವರು) : ಅಧ್ಯಕ್ಷರೆ, ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ), ವಿಧೇಯಕ 1998ನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– * ವಿಧೇಯಕವನ್ನು ಮಂಡಿಸಲಾಗಿದೆ.* (ಅನುಬಂಧ-1)